ಸರ್ಕಾರದ ಆದೇಶವನ್ನು ದಿನಾಂಕ ೮-೧೨-೧೯೯೨ರಂದು ಹೊರಡಿಸಲಾಗಿದ್ದು ಮೇಲ್ದರ್ಜೆಗೆ ಏರಿಸುವ ರಸ್ತೆಗಳ ವಿವರಗಳನ್ನು ಇಷ್ಟರಲ್ಲೇ ತೀರ್ಮಾನಿಸಲಾಗುವುದು.

ಆ) ಹೀಗೆ ಮೇಲ್ದರ್ಜೆಗೇರಿಸಿದ ರಸ್ತೆಗಳಿಗೆ ಪ್ರತಿ ಕಿ. ಮೀ. ಉದ್ದಕ್ಕೆ ೧.೫ ಲಕ್ಷ ರೂಗಳ ಅಂದಾಜಿನಲ್ಲಿ ರಸ್ತೆಗಳನ್ನು ಉತ್ತಮಪಡಿಸಲು ಯೋಚಿಸಲಾಗಿದೆ.

ಇ) ಈ ರೀತಿ ಮೇಲ್ದರ್ಜೆಗೆ ಏರಿಸಿದ ಕೆಲವು ಮುಖ್ಯ ರಸ್ತೆಗಳನ್ನು ಅಭಿವೃದ್ಧಿಪಡಿಸಿ ಡಾಂಬರೀಕರಣವನ್ನು ಮಾಡಲಾಗುವುದು.

ಚಿಂತಾಮಣಿ ತಾಲ್ಲೂಕಿನಲ್ಲಿ ಹೊಸದಾಗಿ ನಿರ್ಮಿಸಲು ಜಿಲ್ಲಾ ಪರಿಷತ್‌ನಿಂದ ಅಂದಾಜು ತಯಾರ್ಮಾಡಿ ಕೆಲಸ

೧೯೬೫ (೧೫೫೫೩) ಶ್ರೀ ಚೌಡರೆಡ್ಡಿ (ಚಿಂತಾಮಣಿ):- ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ಚಿಂತಾಮಣಿ ತಾಲ್ಲೂಕು (ಕೋನಪ್ಪಲ್ಲಿ ಮಂಡಲ್) ಅಂಬಾಜಿದುರ್ಗ ಹೋಬಳಿ ಚೌಂಪ್ರ ಹಳ್ಳಿ ಆತ್ತಿಕೆರೆ ಹೊಸದಾಗಿ ನಿರ್ಮಿಸಲು ಜಿಲ್ಲಾ ಪರಿಷತ್‌ನಿಂದ ಅಂದಾಜು ತಯಾರ್ಮಾಡಿ ಕೆಲಸ ಪ್ರಾರಂಭವಾಗಿದೆಯೇ?

ಆ) ಹಾಗೇನಾದರೂ ಅಂದಾಜು ತಯಾರಿಸಿದ್ದರೆ ಅಂದಾಜು ಮೊಬಲಗು ಎಷ್ಟು? ತಯಾರಿಸಿದ ದಿನಾಂಕ ಮತ್ತು ಈ ಬಗ್ಗೆ ಎಷ್ಟು ಕೆಲಸ ಆಗಿದೆ?

ಇ) ಸದರಿ ಕೆಲಸದ ಬಗ್ಗೆ ಕೆಲವರು ಲೋಕಾಯುಕ್ತಕ್ಕೆ ದೂರು ನೀಡಿದ್ದು ಇದರ ಬಗ್ಗೆ ವಿಚಾರಣೆ ನಡೆದಿದೆಯೇ? ಮತ್ತು ಸದರಿ ಅಧಿಕಾರಿಗಳ ಬಗ್ಗೆ ಏನಾದರೂ ಕ್ರಮ ತೆಗೆದುಕೊಂಡಿದ್ದಾರೆಯೇ?

ಈ) ಬಹಳ ದಿನಗಳಿಂದ ಈ ಕಾಮಗಾರಿ ಕೆಲಸ ನಿಂತು ಹೋಗಿ, ಅಚ್ಚುಕಟ್ಟುದಾರರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಕೆ. ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಮಂತ್ರಿಗಳು):-

ಅ) ಹೌದು.

ಆ) ಅಂದಾಜು ಮೊತ್ತ ೯.೯೮ ಲಕ್ಷ ರೂ.ಗಳಾಗಿದ್ದು ದಿನಾಂಕ ೨೧-೨-೧೯೯೦ರಂದು ತಯಾರಿಸಲಾಗಿದೆ. ನೀರಿನ ಗರಿಷ್ಟ ಮಟ್ಟದವರೆಗೆ ಏರಿಯನ್ನು ನಿರ್ಮಿಸಲಾಗಿದೆ ಹಾಗೂ ಕೋಡಿಯನ್ನು ನಿರ್ಮಿಸಲಾಗಿದೆ.

ಇ) ಸದರಿ ಕೆಲಸದ ಬಗ್ಗೆ ಲೋಕಾಯುಕ್ತದ ಅಧಿಕಾರಿಗಳು ಸ್ಥಳ ತನಿಖೆ ಮಾಡಿ ಸಂಬಂಧಪಟ್ಟ ಕಡತಗಳನ್ನು ತೆಗೆದುಕೊಂಡು ಹೋಗಿದ್ದಾರೆ. ಈ ಬಗ್ಗೆ ಲೋಕಾಯುಕ್ತದೊಂದಿಗೆ ವ್ಯವಹರಿಸಲಾಗುತ್ತಿದೆ.

ಈ) ಬಂದಿದೆ.

ತಮಿಳುನಾಡಿನ ಊಟಿಯಲ್ಲಿರುವ ಕರ್ನಾಟಕ ವಸತಿ ಗೃಹವು ಹೀನಾಯ ಸ್ಥಿತಿಯಲ್ಲಿರುವ ಬಗ್ಗೆ

೧೯೬೬ (೧೫೫೪೪) ಶ್ರೀ ಅಂಜನಾ ಮೂರ್ತಿ (ನೆಲಮಂಗಲ):- ಮಾನ್ಯ ಲೋಕೋಪಯೋಗಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ:

ಅ) ತಮಿಳುನಾಡಿನ ಊಟಿಯಲ್ಲಿರುವ ಕರ್ನಾಟಕ ರಾಜ್ಯದ ಲೋಕೋಪಯೋಗಿ ಇಲಾಖೆಗೆ

ಸೇರಿದ ವಸತಿ ಗೃಹವು ಯಾವ ಸೌಕರ್ಯಗಳೂ ಇಲ್ಲದೆ ಹೀನಾಯ ಸ್ಥಿತಿಯಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಪ್ರವಾಸಿಗರ ಹಿತದೃಷ್ಟಿಯಿಂದ ಸೌಕರ್ಯ ಒದಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಜಿ. ಹೆಡ್. ಅಶ್ವತ್ಥ ರೆಡ್ಡಿ (ಲೋಕೋಪಯೋಗಿ ಮಂತ್ರಿಗಳು):-

ಅ) ಕರ್ನಾಟಕ ರಾಜ್ಯಕ್ಕೆ ಸೇರಿದಂತೆ ಒಂದು ವಸತಿಗೃಹವಿದ್ದು ಅದು ತಕ್ಕಮಟ್ಟಿಗೆ ಸುಸ್ಥಿತಿಯಲ್ಲಿದೆ.

ಆ) ಸದರೀ ವಸತಿಗೃಹದ ಅಭಿವೃದ್ಧಿಗಾಗಿ ೩.೬೫ ಲಕ್ಷ ರೂ. ಗಳ ಅಂದಾಜನ್ನು ತಯಾರಿಸಲಾಗಿದ್ದು, ಅದನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಲಾಗುತ್ತಿದೆ.

ರಾಣೆಬೆನ್ನೂರು ತಾಲ್ಲೂಕಿನಲ್ಲಿ ಕುಮುದ್ವತಿ ನದಿಗೆ ಅಡ್ಡಗೋಡೆಗಳ ನಿರ್ಮಾಣ

೧೫೯೭ (೧೮೬೮) ಶ್ರೀ ಕೆ. ಬಿ. ಕೋಳಿವಾಡ (ರಾಣೆಬೆನ್ನೂರು):- ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ರಾಣೆಬೆನ್ನೂರು ತಾಲ್ಲೂಕಿನಲ್ಲಿ ಕುಮುದ್ವತಿ ನದಿಗೆ ಅಡ್ಡಲಾಗಿ ಲಿಂಗದಹಳ್ಳಿ ಹತ್ತಿರ ನಿಟ್ಟುರು, ಚಿಕ್ಕಮಾನಗನೂರು, ಹಿರೆಮಾಗನೂರ ಈ ಗ್ರಾಮದ ಹತ್ತಿರ ನದಿಗೆ ಅಡ್ಡ ಗೋಡೆಗಳನ್ನು (ಬ್ಯಾರೇಜು) ಕಟ್ಟಲು ಮನವಿಗಳು ಬಂದಿವೆಯೇ?

ಆ) ಹಾಗಿದ್ದಲ್ಲಿ ಈ ಅಡ್ಡಗೋಡೆಗಳನ್ನು ೧೯೯೭-೯೩ರಲ್ಲಿ ನಿರ್ಮಿಸಿ ಮುಗಿಸಲಾಗುವುದೇ?

ಶ್ರೀ ಕೆ. ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಸಚಿವರು):-

ಅ) ಹೌದು.

ಆ) ಈ ಅಡ್ಡಗೋಡೆಗಳು ಹೊಸ ಕಾಮಗಾರಿಯಾಗಿರುವುದರಿಂದ ಈ ಕಾಮಗಾರಿಗಳನ್ನು ೧೯೯೭-೯೩ರ ಒಟ್ಟು ಮೊತ್ತದ ಅನುದಾನದಲ್ಲಿ, ತಾಂತ್ರಿಕವಾಗಿ ಮತ್ತು ಆರ್ಥಿಕವಾಗಿ ಶಕ್ಯವೆಂದು ಕಂಡು ಬಂದಲ್ಲಿ, ಕಾಮಗಾರಿಗಳನ್ನು ಶುರು ಮಾಡಿ ಮುಗಿಸಲು ಪ್ರಯತ್ನಿಸಲಾಗುವುದು.

ಏತ ನೀರಾವರಿ ಯೋಜನೆ

೧೫೯೮ (೧೮೬೯) ಶ್ರೀ ಕೆ. ಬಿ. ಕೋಳಿವಾಡ (ರಾಣೆಬೆನ್ನೂರು):- ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ರಾಣೆ ಬೆನ್ನೂರು ತಾಲ್ಲೂಕಿನಲ್ಲಿ ತುಂಗಭದ್ರಾ ನದಿಗೆ ಮೇಡ್ಲೇರಿ ಹತ್ತಿರ ಕವಲೆತ್ತು ನಟವಳ್ಳಿ ಈ ಗ್ರಾಮಗಳ ಹತ್ತಿರ ಏತ ನೀರಾವರಿ ಯೋಜನೆಗಳನ್ನು ಕೂಡಲೇ ಕೈಗೆತ್ತಿಕೊಳ್ಳಲು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಪ್ರತಿಯೊಂದು ಏತ ನೀರಾವರಿಗೆ ತಗಲುವ ವೆಚ್ಚವೆಷ್ಟು ಮತ್ತು ಆ ಯೋಜನೆಗಳಿಂದ ಎಷ್ಟು ಕ್ಷೇತ್ರಕ್ಕೆ ನೀರಾವರಿ ಸೌಲಭ್ಯ ಒದಗುವುದು?

ಶ್ರೀ ಕೆ. ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಸಚಿವರು):-